Received on 4/9/2020
Nvp

**ಕರ್ನಾಟಕ ಸರ್ಕಾರ**

ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಡಿಸಿಇ:ಟಿಆರ್‌ಎನ್:ಟಿಆರ್‌ಎನ್:14:2020;ಟಿಡಿಜಿ;

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:03-09-2020.

## ಸುತ್ತೋಲೆ

ವಿಷಯ: ಕಾಲೇಜು ಶಿಕ್ಷಣ ಇಲಾಖೆಯ ರಾಜ್ಯ ವ್ಯಾಪ್ತಿ ಉಳಿಕೆ ಮೂಲವೃಂದದ ಅಧೀಕ್ಷಕರುಗಳಿಗೆ ಗೆಜೆಟೆಡ್ ಮ್ಯಾನೇಜರ್ ಹುದ್ದೆಗೆ ಬಡ್ತಿ ನೀಡಿ ಸ್ಥಳನಿಯುಕ್ತಿಗೊಳಿಸುವ ಸಲುವಾಗಿ ಸಿ ವಲಯದಲ್ಲಿ ಖಾಲಿ ಹುದ್ದೆಗಳನ್ನು ಸೃಜಿಸುವ ಸಲುವಾಗಿ ವರ್ಗಾವಣೆ ಮಾಡುವ ಬಗ್ಗೆ.

ಉಲ್ಲೇಖ: ಈ ಕಛೇರಿ ಸಮ ಸಂಖ್ಯೆಯ ದಿ:24-08-2020ರ ಸುತ್ತೋಲೆ.

*****

ಕಾಲೇಜು ಶಿಕ್ಷಣ ಇಲಾಖೆಯ ರಾಜ್ಯ ವ್ಯಾಪ್ತಿ ಉಳಿಕೆ ಮೂಲ ವೃಂದದ ಅಧೀಕ್ಷಕರುಗಳಿಗೆ ಗೆಜೆಟೆಡ್ ಮ್ಯಾನೇಜರ್ ಹುದ್ದೆಗೆ ಬಡ್ತಿ ನೀಡಿ ಸ್ಥಳನಿಯುಕ್ತಿಗೊಳಿಸುವ ಸಲುವಾಗಿ ಜಾರಿಯಲ್ಲಿದ್ದ ಕಾಲೇಜು ಶಿಕ್ಷಣ ಇಲಾಖೆಯ ವರ್ಗಾವಣೆ ಕಾಯ್ದೆ 2012ರನ್ವಯ ಪ್ರಸ್ತುತ 'ಸಿ' ಮತ್ತು 'ಬಿ' ವಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗೆಜೆಟೆಡ್ ಮ್ಯಾನೇಜರ್‌ಗಳನ್ನು ವರ್ಗಾವಣೆ ಮಾಡಿ 'ಸಿ' ವಲಯದಲ್ಲಿ ಖಾಲಿ ಹುದ್ದೆಗಳನ್ನು ಸೃಜಿಸಿ ಬಡ್ತಿಗೆ ಸ್ಥಳನಿಯುಕ್ತಿಗೊಳಿಸುವ ಸಲುವಾಗಿ 'ಬಿ' ಮತ್ತು 'ಸಿ' ವಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗೆಜೆಟೆಡ್ ಮ್ಯಾನೇಜರ್‌ಗಳನ್ನು ವರ್ಗಾವಣೆ ಮಾಡಲು ತಾತ್ಕಾಲಿಕ ವೇಳಾಪಟ್ಟಿ ಪ್ರಕಟಿಸಲಾಗಿತ್ತು.

ಆದರೆ 2020ರ ಕರ್ನಟಕ ಆಧ್ಯಾದೇಶ ಸಂಖ್ಯೆ :19 ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ಕಾಲೇಜು ಶಿಕ್ಷಣ ಇಲಾಖೆಯ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) (ನಿರಸನಗೊಳಿಸುವ) ಆಧ್ಯಾದೇಶ 2020 (ದಿನಾಂಕ:28-08-2020 ರಂದು ಕರ್ನಾಟಕ ರಾಜ್ಯ ಪತ್ರ ವಿಶೇಷ ರಾಜ್ಯ ಪತ್ರಿಕೆಯಲ್ಲಿ ಪ್ರಕಟಿತ) ತಕ್ಷಣದಿಂದ ಜಾರಿಗೆ ಬಂದಿದ್ದು ಕಾಲೇಜು ಶಿಕ್ಷಣ ಇಲಾಖೆ ವರ್ಗಾವಣೆ ಅಧಿನಿಯಮ 2012 ನಿರಸನಗೊಂಡಿರುವುದರಿಂದ, 'ಬಿ' ಮತ್ತು 'ಸಿ' ವಲಯಗಳ ಗೆಜೆಟೆಡ್ ಮ್ಯಾನೇಜರ್‌ಗಳ ವರ್ಗಾವಣೆ ಪ್ರಕ್ರಿಯೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಸ್ಥಗಿತಗೊಳಿಸಲಾಗಿದೆ.

**(ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)**

**ಮುಖ್ಯ ಆಡಳಿತಾಧಿಕಾರಿಗಳು**
ಕಾಲೇಜು ಶಿಕ್ಷಣ ಇಲಾಖೆ

**ಇವರಿಗೆ:**

1. ಕಾಲೇಜು ಶಿಕ್ಷಣ ಪ್ರಾದೇಶಿಕ ಕಛೇರಿಗಳ ಜಂಟಿ ನಿರ್ದೇಶಕರುಗಳಿಗೆ-ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.
2. ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರು/ಪ್ರಭಾರಿ ಪ್ರಾಂಶುಪಾಲರುಗಳಿಗೆ-ಮಾಹಿತಿ ಮತ್ತು ಅಗತ್ಯಕ್ರಮಕ್ಕಾಗಿ.
3. ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು-ಇಲಾಖಾ ವೆಬ್‌ಸೈಟ್ ನಲ್ಲಿ ಪ್ರಕಟಿಸಲು.
4. ಕಛೇರಿ ಪ್ರತಿ.

*DCE 06 Circular*